# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1160** |
| ಉತ್ತರಿಸಬೇಕಾದ ದಿನಾಂಕ | : | 28.12.2022 |
| ಉತ್ತರಿಸಬೇಕಾದ ಸಚಿವರು | : | ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮ ಪಂಚಾಯಿತಿ ಮೂಲಕ ವಿತರಣೆ ಮಾಡಲು ನೀಡಿರುವ ಒಟ್ಟು ಮನೆಗಳ ಸಂಖ್ಯೆ ಎಷ್ಟು; | 2021-22 ನೇ ಸಾಲಿಗೆ ರಾಜ್ಯದ ವಿವಿಧ ವಸತಿ ಯೋಜನೆಗಳಡಿ 2,18,932 ಮನೆಗಳನ್ನು ಗ್ರಾಮ ಪಂಚಾಯತಿಗಳಿಗೆ ನೀಡಲಾಗಿರುತ್ತದೆ. |
| ಆ) | ನೀಡಲಾದ ಮನೆಗಳಲ್ಲಿ ನಿರ್ಮಾಣ ಹಂತದಲ್ಲಿರುವ ಮನೆಗಳಿಗೆ ತಾಂತ್ರಿಕ ಕಾರಣಗಳಿಂದ ಹಣ ಬಿಡುಗಡೆಯಾಗದೆ ಇರುವಂತಹ ಫಲಾನುಭವಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು) | ರಾಜ್ಯದಲ್ಲಿ 2021-22ನೇ ಸಾಲಿನ ಗ್ರಾಮೀಣ ಪ್ರದೇಶದ ವಿವಿಧ ವಸತಿ ಯೋಜನೆಗಳಡಿ ಆಯ್ಕೆಗೊಂಡ ಫಲಾನುಭವಿಗಳಿಗೆ ಈವರೆಗೆ ಜಿ.ಪಿ.ಎಸ್. ಆಧಾರಿತ ಭೌತಿಕ ಪ್ರಗತಿಗೆ ಅನುಗುಣವಾಗಿ ಆಧಾರ ಜೋಡಣೆಯಾದ ಅರ್ಹ ಫಲಾನುಭವಿಗಳಿಗೆ ರೂ.415.31ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.<br><br>ವಿವಿಧ ವಸತಿ ಯೋಜನೆಗಳಡಿಯಲ್ಲಿ ಮಂಜೂರಾದ ನಿರ್ಮಾಣ ಹಂತದಲ್ಲಿರುವ ಮನೆಗಳ ಭೌತಿಕ ಪ್ರಗತಿಗೆ ಅನುಗುಣವಾಗಿ ಆಧಾರ್ ಜೋಡಣೆಯಾಗಿರುವ ಫಲಾನುಭವಿಯ ಬ್ಯಾಂಕ್ ಖಾತೆಗೆ ಅನುದಾನವನ್ನು ಹಂತ ಹಂತವಾಗಿ ಬಿಡುಗಡೆ ಮಾಡಲಾಗುತ್ತಿದೆ. ಪ್ರಗತಿಯಲ್ಲಿರುವ ಮನೆಗಳಿಗೆ ಅನುದಾನ ಬಿಡುಗಡೆ ಮಾಡಲು ಇರುವ ತಾಂತ್ರಿಕ ಸಮಸ್ಯೆಗಳನ್ನು ನಿಗಮದ ಹಂತದಲ್ಲಿ ಬಗೆಹರಿಸಿ ಅನುದಾನ ಬಿಡುಗಡೆಗೆ ಕ್ರಮ ವಹಿಸಲಾಗುತ್ತಿರುವುದರಿಂದ ಬಾಕಿ ಇರುವುದಿಲ್ಲ. |

ಸಂಖ್ಯೆ :ವಇ 570 ಹೆಚ್‌ಎಂ 2022

**(ವಿ. ಸೋಮಣ್ಣ)**
ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ
ಸಚಿವರು